**Bangalore**
**Regional News**
**24.03.2025 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ೧೮ ಶಾಸಕರ ಅಮಾನತು ಪ್ರಕರಣ; ನಿರ್ಧಾರ ಸಮರ್ಥಿಸಿಕೊಂಡ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್

೨. ಗುತ್ತಿಗೆಯಲ್ಲಿ ಮುಸ್ಲೀಮರಿಗೆ ಮೀಸಲಾತಿ ವಿಚಾರ; ಬಿಜೆಪಿ, ಜೆಡಿಎಸ್ ಹೊಂದಾಣಿಕೆ ಇಲ್ಲ ಎಂಬ ಆರೋಪ ಸತ್ಯಕ್ಕೆ ದೂರ - ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

೩. ಸಂವಿಧಾನ ಬದಲಾವಣೆ ಮಾಡುವುದಾಗಿ ಹೇಳಿಲ್ಲ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ

೪. ಹನಿಟ್ರ್ಯಾಪ್ ಪ್ರಕರಣ; ಸರ್ವೋಚ್ಚ ನ್ಯಾಯಾಲಯದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲು

೫. ಇಂದು ವಿಶ್ವ ಕ್ಷಯರೋಗ ದಿನ; ಕ್ಷಯ ಮುಕ್ತ ಭಾರತಕ್ಕೆ ಜಿಲ್ಲಾಡಳಿತಗಳಿಂದ ಜನಜಾಗೃತಿ

**<><*<><>*><>**

ಸಭಾಧ್ಯಕ್ಷರ ಪೀಠಕ್ಕೇರಿ ದುರ್ವತನೆ ತೋರಿದ್ದ ೧೮ ಶಾಸಕರನ್ನು ೬ ತಿಂಗಳು ಅಮಾನತುಗೊಳಿಸಿರುವುದನ್ನು ಶಾಸಕರು ಶಿಕ್ಷೆ ಎಂದು ಭಾವಿಸುವುದು ಬೇಡ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸದನದಲ್ಲಿ ಅಂದು ನಡೆದ ಘಟನೆ ರಾಜ್ಯದ ಜನತೆಗೆ ಅಸಹ್ಯ ಮೂಡಿಸಿದೆ. ಶಾಸಕರು ತಮ್ಮ ವರ್ತನೆಯನ್ನು ತಿದ್ದಿ ಕೆಲಸ ಮಾಡುವ ನಿಟ್ಟಿನಲ್ಲಿ ಕ್ರಮ ವಹಿಸಲಾಗಿದೆ. ಘಟನೆ ಮತ್ತೆ ಮತ್ತೆ ಮುಂದುವರಿದರೆ ಒಂದು ವರ್ಷ ಅಮಾನತು ಅಥವಾ ಕಾಯ್ದೆಯಡಿ ಲಭ್ಯವಿರುವ ಕಠಿಣ ಕ್ರಮವನ್ನು ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಬಜೆಟ್ ಅಧಿವೇಶನದ ಕೊನೆಯ ದಿನದಂದು ಧನ ವಿನಿಯೋಗದ ಮಸೂದೆ ಮಂಡನೆ ವೇಳೆ ಪ್ರಜಾಪ್ರಭುತ್ವ ವ್ಯವಸ್ಥೆಗೆ ಕಪ್ಪು ಚುಕ್ಕೆಯಾಗುವ ರೀತಿಯಲ್ಲಿ ಕೆಲ ಶಾಸಕರು ವರ್ತಿಸಿದ್ದರು. ಮಸೂದೆ ತಡೆಯುವ ಉದ್ದೇಶದಿಂದಲೇ ಈ ಘಟನೆ ನಡೆದಿದೆ ಎಂದು ತಿಳಿಸಿದ್ದಾರೆ. ಸಭಾಧ್ಯಕ್ಷರ ಪೀಠ ಗೌರವಯುತವಾಗಿದೆ ಎಂಬ ಅರಿವು ಶಾಸಕರಿಗೆ

ಇರಬೇಕು. ಸಭಾಧ್ಯಕ್ಷನಾಗಿ ಈ ರೀತಿಯ ವರ್ತನೆ ಸಹಿಸಲು ಅಸಾಧ್ಯವಾದ ಹಿನ್ನೆಲೆಯಲ್ಲಿ ಅಮಾನತು ಕ್ರಮ ಕೈಗೊಳ್ಳಲಾಗಿದೆ ಎಂದು ತಮ್ಮ ನಿರ್ಧಾರವನ್ನು ಯು.ಟಿ.ಖಾದರ್ ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಮುಸ್ಲಿಮರಿಗೆ ಸರ್ಕಾರ ಗುತ್ತಿಗೆಯಲ್ಲಿ ಶೇಕಡ ೪ ರಷ್ಟು ಮೀಸಲಾತಿ ನೀಡಿರುವುದರ ವಿರುದ್ಧದ ಹೋರಾಟದಲ್ಲಿ ಜೆಡಿಎಸ್ ಹಾಗೂ ಬಿಜೆಪಿ ನಡುವೆ ಹೊಂದಾಣಿಕೆ ಇಲ್ಲ ಎಂಬ ಆರೋಪ ಸತ್ಯಕ್ಕೆ ದೂರ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸಾಮಾಜಿಕ ಜಾಲತಾಣದಲ್ಲಿ ಸ್ಪಷ್ಟಪಡಿಸಿದ್ದಾರೆ. ವಿಧಾನಮಂಡಲ ಅಧಿವೇಶನ ಆರಂಭಕ್ಕೆ ಮೊದಲೇ ಬೆಂಗಳೂರಿನಲ್ಲಿ ಎನ್‌ಡಿಎ ’ಸಮನ್ವಯ ಸಮಿತಿ’ ಸಭೆ ನಡೆದು ಎಲ್ಲಾ ವಿಚಾರಗಳನ್ನೂ ಸಮಗ್ರವಾಗಿ ಚರ್ಚಿಸಿ, ಸರಕಾರದ ವಿರುದ್ಧ ಹೋರಾಟದ ರೂಪುರೇಷೆ ರೂಪಿಸಲಾಗಿತ್ತು ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ಸರ್ಕಾರವು ಕೇವಲ ಚುನಾವಣಾ ಸ್ವಾರ್ಥಕ್ಕೆ, ಮೀಸಲಾತಿ ವ್ಯವಸ್ಥೆಯನ್ನು ಹಾಳು ಮಾಡುತ್ತಿದೆ. ಮೀಸಲು ಧರ್ಮಾಧಾರಿತ ಅಲ್ಲ. ಅದು ಸಾಮಾಜಿಕ ನ್ಯಾಯದ ತಳಹದಿಯ ಮೇಲೆ ನಿಂತಿದೆ ಎಂಬುದು ಜೆಡಿಎಸ್ ಅಚಲ ನಿಲುವು ಎಂದು ಹೇಳಿದ್ದಾರೆ.

<><*<><>*><>

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿನ ಪಾರದರ್ಶಕ ಕಾಯ್ದೆ-ಕೆಟಿಟಿಪಿ ಯನ್ನು ತಿದ್ದುಪಡಿ ಮಾಡಿ ಗುತ್ತಿಗೆಯಲ್ಲಿ ಮುಸಲ್ಮಾನರಿಗೆ ಶೇಕಡ ೪ ರಷ್ಟು ಮೀಸಲು ನೀಡುತ್ತಿರುವ ಕಾಂಗ್ರೆಸ್ ಪಕ್ಷದ ನಿರ್ಧಾರ ಸಂವಿಧಾನದ ಆಶಯಕ್ಕೆ ವಿರುದ್ಧವಾಗಿದೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದ್ದಾರೆ.  ನವದೆಹಲಿಯಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಈಗಾಗಲೇ ಆಂಧ್ರಪ್ರದೇಶ ಹಾಗೂ ಕೋಲ್ಕತ್ತಾ ಉಚ್ಚ ನ್ಯಾಯಾಲಯಗಳು ಧರ್ಮಾಧಾರಿತ ಮೀಸಲಾತಿಯನ್ನು ಕೊಡಬಾರದು ಎಂದು ಆದೇಶ ನೀಡಿದೆ. ಮೀಸಲಾತಿಯು ಧರ್ಮದ ಆಧಾರದ ಮೇಲಿರರಬಾರದು ಎಂದು ಸರ್ವೋಚ್ಚ ನ್ಯಾಯಾಲಯವು ಪಶ್ಚಿಮ ಬಂಗಾಳ ಸರ್ಕಾರಕ್ಕೆ ’ಮೌಖಿಕ ಸೂಚನೆ’ ನೀಡಿತ್ತು.  ಕಾಂಗ್ರೆಸ್ ಸರ್ಕಾರ ಈಗ ಕೇವಲ ಮುಸಲ್ಮಾನರಿಗೆ ಮಾತ್ರ ಅನ್ವಯ ಎಂದು ಹೇಳಿರುವುದು ಮತ ಬ್ಯಾಂಕ್ ರಾಜಕಾರಣಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ದೂರಿದ್ದಾರೆ.

<><*<><>*><>

ಮುಸಲ್ಮಾನರಿಗೆ ಗುತ್ತಿಗೆಯಲ್ಲಿ ಶೇಕಡ ೪ ರಷ್ಟು ಮೀಸಲಾತಿ ನೀಡುವ ಮೂಲಕ ರಾಜ್ಯ ಸರ್ಕಾರ ಸಂವಿಧಾನವನ್ನು ಬುಡಮೇಲು ಮಾಡಲು ಹೊರಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆಯ ವಿರುದ್ಧ ಅಸಮಾದಾನ ವ್ಯಕ್ತಪಡಿಸಿದ್ದಾರೆ. ಸಂವಿಧಾನವನ್ನು ಬದಲಾಯಿಸುವವರು ಯಾರು ಹಾಗೂ ಸಂವಿಧಾನವನ್ನು ಅತಿ ಹೆಚ್ಚು ಬಾರಿ ತಿದ್ದುಪಡಿ ಮಾಡಿದವರು ಯಾರು ಎಂಬುದಕ್ಕೆ ಕಾಂಗ್ರೆಸ್ ಉತ್ತರಿಸಬೇಕು ಎಂದು ಹೇಳುವಂತೆ ಆಗ್ರಹಿಸಿದ್ದಾರೆ.

<><*<><>*><>

"ಸಂವಿಧಾನ ಬದಲಾವಣೆ ಮಾಡುವುದಾಗಿ ತಾವು ಎಲ್ಲಿಯೂ ಹೇಳಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ತಮ್ಮ ಹೇಳಿಕೆಯನ್ನು ತಿರುಚಿ ಬಿಜೆಪಿ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಇದರ ವಿರುದ್ಧ ಕಾನೂನು ಹೋರಾಟ ಮಾಡಲಾಗುವುದು ಎಂದು ಹೇಳಿದ್ದಾರೆ. "ನ್ಯಾಯಾಲಯಗಳ ತೀರ್ಪಿನ ಅನುಸಾರ ತಿದ್ದುಪಡಿ ತಂದಿರುವ ನಿದರ್ಶನವಿದೆ ಎಂದು ಹೇಳಿದ್ದೇನೆಯೇ ಹೊರತು, ಸಂವಿಧಾನವನ್ನು ಬದಲಾವಣೆ ಮಾಡಲಾಗುವುದು ಎಂದು ಹೇಳಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ "ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವರದಿ ಆಧಾರದ ಮೇಲೆ ಮುಸ್ಲಿಮರಿಗೆ ಶೇಕಡ ೪ ರಷ್ಟು ಮೀಸಲಾತಿ ನೀಡಲಾಗಿದೆ ಎಂದು ಅವರು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ರಾಜ್ಯದಲ್ಲಿ ನಡೆದಿದೆ ಎನ್ನಲಾದ ಹನಿ ಟ್ರ್ಯಾಪಿಂಗ್ ಪ್ರಕರಣದ ತನಿಖೆ ನಡೆಸುವಂತೆ ಸುಪ್ರೀಂಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲಾಗಿದೆ. ಪ್ರಕರಣದ ವಿಚಾರಣೆಯನ್ನು ಕೂಡಲೇ ಕೈಗೆತ್ತಿಕೊಳ್ಳಬೇಕೆಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಪೀಠದ ಮುಂದೆ ಅರ್ಜಿದಾರರು ಮನವಿ ಮಾಡಿದ್ದಾರೆ. ಅರ್ಜಿಯ ವಿಚಾರಣೆಯನ್ನು ಕೈಗೆತ್ತಿಕೊಳ್ಳಲು ಸುಪ್ರೀಂಕೋರ್ಟ್ ಒಪ್ಪಿದೆ ಎಂದು ಐಎಎನ್ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಈ ಪ್ರಕರಣದಲ್ಲಿ ನ್ಯಾಯಮೂರ್ತಿ ಹೆಸರೂ ಕೂಡ ಇರುವುದನ್ನು ಅರ್ಜಿದಾರರು ವಿಚಾರಣೆ ಸಂದರ್ಭದಲ್ಲಿ ಉಲ್ಲೇಖಿಸಿದ್ದಾರೆ. ಪ್ರಕರಣವನ್ನು ಇಂದು ಅಥವಾ ನಾಳೆ ಕೈಗೆತ್ತಿಕೊಳ್ಳಲಾಗುವುದು ಎಂದು ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ತಿಳಿಸಿದ್ದಾರೆ.

<><*<><>*><>

ಇಂದು ವಿಶ್ವ ಕ್ಷಯರೋಗ ದಿನ. ಕ್ಷಯರೋಗ ಕುರಿತು ಜಾಗೃತಿ ಮೂಡಿಸಿ ಕ್ಷಯರೋಗ ಮುಕ್ತ ಸಮಾಜ ನಿರ್ಮಾಣ ಮಾಡಲು ಪ್ರತಿವರ್ಷ ಮಾರ್ಚ್ ೨೪ರಂದು ವಿಶ್ವ ಕ್ಷಯರೋಗ ದಿನ ಆಚರಿಸಲಾಗುತ್ತದೆ. ಡಾ. ರಾಬರ್ಟ್ ಕೋಚ್ ಅವರು ಟಿಬಿ ಬ್ಯಾಕ್ಟೀರಿಯಾವನ್ನು ಕಂಡುಹಿಡಿದ ವಾರ್ಷಿಕೋತ್ಸವದ ಸ್ಮರಣಾರ್ಥ ಈ ದಿನ ಆಚರಿಸಲಾಗುತ್ತದೆ. ದಾವಣಗೆರೆ ಜಿಲ್ಲೆಯಲ್ಲಿ ೪೦ ಗ್ರಾಮ ಪಂಚಾಯತಿಗಳನ್ನು ಕ್ಷಯರೋಗ ಮುಕ್ತ ಎಂದು ಘೋಷಿಸಲಾಗಿದೆ. ಜಿಲ್ಲಾಡಳಿತ ಹಾಗೂ ಕುಟುಂಬ ಕಲ್ಯಾಣ ಇಲಾಖೆ ಆಶ್ರಯದಲ್ಲಿಂದು ಹಮ್ಮಿಕೊಂಡಿದ್ದ ವಿಶ್ವ ಕ್ಷಯರೋಗ ಮುಕ್ತ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ, ಇದರಲ್ಲಿ ಆಶಾ ಕಾರ್ಯಕರ್ತೆಯರ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ಶ್ಲಾಘಿಸಿದ್ದಾರೆ. ಕ್ಷಯರೋಗದ ಯಾವುದೇ ಲಕ್ಷಣಗಳು ಕಂಡುಬಂದರೂ ತಜ್ಞ ವೈದ್ಯರನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದ್ದಾರೆ.

ಧ್ವನಿ: ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ

ಬಳ್ಳಾರಿ ಜಿಲ್ಲೆಯಲ್ಲಿ ಐದು ಗ್ರಾಮ ಪಂಚಾಯತಿಗಳನ್ನು ಕ್ಷಯರೋಗ ಮುಕ್ತವಾಗಿರುವುದಾಗಿ ಘೋಷಿಸಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಹೇಳಿದ್ದಾರೆ. ಬಳ್ಳಾರಿಯಲ್ಲಿಂದು ನಡೆದ ವಿಶ್ವ ಕ್ಷಯರೋಗ ಮುಕ್ತ ಕಾರ್ಯಕ್ರಮದಲ್ಲಿ ಬಳ್ಳಾರಿ ತಾಲೂಕಿನ ಭೈರದೇವನಹಳ್ಳಿ ಯರ್ರಗುಡಿ, ಸಂಗನಕಲ್ಲು, ಸಿರಿವಾರ ಕೋರ್ಲಗುಂದಿ ಗ್ರಾಮ ಪಂಚಾಯ್ತಿಗಳನ್ನು ಕ್ಷಯ ಮುಕ್ತ ಮಾಡಲು ಶ್ರಮಿಸುತ್ತಿರುವ ಆರೋಗ್ಯ ಇಲಾಖೆಯ ಕಾರ್ಯಕರ್ತರಿಗೆ, ವೈದ್ಯರಿಗೆ ಇಂದು ಸನ್ಮಾನಿಸಲಾಯ್ತು. ಇದಕ್ಕೂ ಮುನ್ನನಗರದಲ್ಲಿ ಕ್ಷಯ ರೋಗದ ಬಗ್ಗೆ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿತ್ತು. ಧಾರವಾಡ ಜಿಲ್ಲೆಯ ೩೫ ಗ್ರಾಮ ಪಂಚಾಯಿತಿಗಳನ್ನು ಕ್ಷಯ ಮುಕ್ತ ಗ್ರಾಮ ಎಂದು ಘೋಷಣೆ ಮಾಡಲಾಗಿದೆ. ಆರೋಗ್ಯ ಇಲಾಖೆ ಹಾಗೂ ಗ್ರಾಮ ಪಂಚಾಯಿತಿಗಳ ಕಾಳಜಿ, ಬದ್ಧತೆಯಿಂದ ಈ ಹೆಮ್ಮೆಯ ಸಾಧನೆ ಸಾಧ್ಯವಾಗಿದೆ ಎಂದು ಜಿಲ್ಲಾ ಕ್ಷಯ ರೋಗ ನಿರ್ಮೂಲನ ಅಧಿಕಾರಿ ಡಾ. ರವೀಂದ್ರ ಭೋವೇರ ತಿಳಿಸಿದ್ದಾರೆ.

<><*<><>*><>

ಚಿಕ್ಕಮಗಳೂರಿನ ಕದ್ರಿಮಿದ್ರಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಸರ್ಕಾರಿ ವೈದ್ಯಕೀಯ ಕಾಲೇಜು ಕಟ್ಟಡವನ್ನು ಶೀಘ್ರದಲ್ಲಿಯೆ ಲೋಕಾರ್ಪಣೆಗೊಳಿಸಲಾಗುವುದು ಎಂದು ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ ಜಾರ್ಜ್ ತಿಳಿಸಿದ್ದಾರೆ. ಚಿಕ್ಕಮಗಳೂರು ನಗರದ ಜಿಲ್ಲಾ ಸರ್ಕಾರಿ ಆಸ್ಪತ್ರೆ ಸಮೀಪ ನೂತನವಾಗಿ ನಿರ್ಮಾಣಗೊಂಡಿರುವ ಹೊರ ರೋಗಿಗಳ ವಿಭಾಗದ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**<><*<><>*><>**

<u>ಇನ್ನು ಸಂಕ್ಷಿಪ್ತಸುದ್ದಿ...</u>

೧. ಯುಗಾದಿ ಮತ್ತು ರಂಜಾನ್ ಹಬ್ಬದ ಪ್ರಯುಕ್ತ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ಸರಿದೂಗಿಸಲು ರೈಲ್ವೆ ಇಲಾಖೆ ಬೆಂಗಳೂರಿನ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ಮತ್ತು ಬೆಳಗಾವಿ ನಿಲ್ದಾಣಗಳ ನಡುವೆ ವಿಶೇಷ ಎಕ್ಸ್ ಪ್ರೆಸ್ ರೈಲುಗಳ ಕಾರ್ಯಾಚರಣೆಗೆ ಅನುಮೋದನೆ ನೀಡಿದೆ.

೨. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಇಂದು ರಸ್ತೆ ಅವಘಡಗಳ ತ್ವರಿತ ನಿವಾರಣೆಗಾಗಿ ಹೊಸದಾಗಿ ಖರೀದಿಸಿರುವ ೫ ಸಂಚಾರಿ ದುರಸ್ಥಿ ವ್ಯಾನುಗಳನ್ನು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಲೋಕಾರ್ಪಣೆಗೊಳಿಸಿದರು.

೩. ಹಾವೇರಿ ಜಿಲ್ಲೆಯ ಏಳು ತಾಲ್ಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣದಲ್ಲಿ ಪ್ರಸಕ್ತ ಹಿಂಗಾರು ಹಂಗಾಮಿನಲ್ಲಿ ಬೆಳೆದಿರುವ ಜೋಳವನ್ನು ಬೆಂಬಲ ಬೆಲೆ ಯೋಜನೆಯಡಿ ಖರೀದಿ ಮಾಡಲು ಕೇಂದ್ರ ಆರಂಭಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**